## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1496 |
| ಸದಸ್ಯರ ಹೆಸರು | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 24.09.2021 |

| ಕ್ರಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ. | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಭಿವೃದ್ಧಿ ಕಾಮಗಾರಿ ಗಳ ಅನುಷ್ಠಾನದಲ್ಲಿ ವಿಳಂಬವನ್ನು ತಪ್ಪಿಸುವ ಸಲುವಾಗಿ ರೂ.5.00 ಲಕ್ಷದೊಳಗಿನ ಕಾಮಗಾರಿಗಳನ್ನು ನೋಂದಾಯಿತ ಗುತ್ತಿಗೆದಾರರಿಗೆ ವಹಿಸಿ ಕೊಡುವ ಕರಾರುಗಳಿಗೆ ಅನುಮೋದನೆ ನೀಡುವ ಅಧಿಕಾರವನ್ನು ಕಾರ್ಯಪಾಲಕ ಅಭಿಯಂತರರಿಗೆ ನೀಡಲಾಗಿದೆಯೇ; | ಹೌದು,<br><br>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:201:ಆರ್‌ಆರ್‌ಸಿ:2020 ದಿನಾಂಕ: 04-09-2020 ಮತ್ತು ಸುತ್ತೋಲೆ ಸಂ: ಗ್ರಾಅಪ:24:ಆರ್‌ಆರ್‌ಸಿ 2020, ದಿನಾಂಕ:21.01.2021 ರಲ್ಲಿ ದಿನಾಂಕ: 04.09.2020 ರಿಂದ 03.09.2021 ರವರೆಗೆ ರೂ. 5.00 ಲಕ್ಷದವರೆಗಿನ ಕಾಮಗಾರಿಗಳ್ನು ನೊಂದಾಯಿತ ಗುತ್ತಿಗೆದಾರರಿಗೆ ಕಾರ್ಯಪಾಲಕ ಇಂಜಿನಿಯರ್ ರವರ ಹಂತದಲ್ಲಿ ಅನುಮೋದನೆ ನೀಡುವ ಅವಕಾಶವನ್ನು ಕಲ್ಪಿಸಲಾಗಿತ್ತು. |
| ಆ. | ಹಾಗಿದ್ದಲ್ಲಿ, ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ತಾಂತ್ರಿಕ ವಿಭಾಗ, ಮಂಡ್ಯ ಇವರು ಸದರಿ ಕಾಮಗಾರಿಗಳನ್ನು ತ್ವರಿತವಾಗಿ ನಿರ್ವಹಿಸದೆ, ಎಲ್ಲಾ ಕಾಮಗಾರಿಗಳ ಕರಾರನ್ನು ಅಧೀಕ್ಷಕ ಅಭಿಯಂತರರು ಹಾಗೂ ಮುಖ್ಯ ಅಭಿಯಂತರರ ಕಚೇರಿಗೆ ಕಳುಹಿಸುವ ಮೂಲಕ ಅನಗತ್ಯವಾಗಿ ವಿಳಂಬ ಧೋರಣೆ ಅನುಸರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುವುದಿಲ್ಲ.<br><br>ಇಂತಹ ಪ್ರಕರಣಗಳು ಸರ್ಕಾರಕ್ಕೆ ಸಲ್ಲಿಕೆಯಾದಲ್ಲಿ ವಿಳಂಭಕ್ಕೆ ಆಸ್ಪದ ನೀಡದೇ ತ್ವರಿತವಾಗಿ ಅನುಮೋದನೆ ನೀಡುವಂತೆ ಸಂಬಂಧಪಟ್ಟವರಿಗೆ ಸೂಚನೆ ನೀಡಲಾಗುವುದು. |
| ಇ. | ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ಪೂರ್ಣ ವಿವರ ನೀಡುವುದು) | |

ಕಡತ ಸಂಖ್ಯೆ: ಗ್ರಾಅಪ:ಅಧಿ-15ವಿಸವಿಪ/1496:ಆರ್‌ಆರ್‌ಸಿ:2021

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು